ಅ) ಜಿಲ್ಲಾ ಪಂಚಾಯತ್ ಅಡಿಯಲ್ಲಿ ಇದಕ್ಕಾಗಿ ಆಯವ್ಯಯದಲ್ಲಿ ಹಣವನ್ನು ಒದಗಿಸಿದರೆ ಮಾತ್ರ ಕ್ರೀಡಾ ಹಾಸ್ಟೆಲ್ ಅನ್ನು ಪುನರಾರಂಭಿಸಬಹುದು.

ಇ) ಜಿಲ್ಲಾ ಪಂಚಾಯತ್ ವತಿಯಿಂದ ಮುಂದಿನ ಕ್ರಮ ಕೈಗೊಳ್ಳಬೇಕಾಗುತ್ತದೆ.

ಈ) ಇದು ಜಿಲ್ಲಾ ಪಂಚಾಯಿತಿ ಯೋಜನೆಯಡಿಯಲ್ಲಿ ಬರುವುದರಿಂದ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಕ್ರಮ ತೆಗೆದುಕೊಳ್ಳಬೇಕಾಗುತ್ತದೆ.

ಮಂಡ್ಯ ವಿಧಾನ ಸಭಾ ಕ್ಷೇತ್ರದಲ್ಲಿ ಸಿ.ಆರ್.ಎಫ್. ಯೋಜನೆ

2199 (2672) ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಂಡ್ಯ ವಿಧಾನ ಸಭಾ ಕ್ಷೇತ್ರದಲ್ಲಿ ಈವರೆವಿಗೂ ಯಾವುದೇ ಒಂದು ರಸ್ತೆಯನ್ನೂ ಸಹ ಸಿ.ಆರ್.ಎಫ್. (C.R.F.) ಅಡಿಯಲ್ಲಿ ಅಭಿವೃದ್ಧಿಪಡಿಸಲು ಪರಿಗಣಿಸದೇ ಇರುವುದನ್ನು ಸರ್ಕಾರ ಗಮನಿಸಿದೆಯೇ;

ಆ) ಮಂಡ್ಯ ವಿಧಾನ ಸಭಾ ಕ್ಷೇತ್ರ ಸಿ.ಆರ್.ಎಫ್. (C.R.F) ಯೋಜನೆಯಡಿ ಬಿಟ್ಟು ಹೋಗಲು ಕಾರಣವೇನು;

ಇ) ಭವಿಷ್ಯದಲ್ಲಿ ಮಂಡ್ಯ ವಿಧಾನ ಸಭಾ ಕ್ಷೇತ್ರದಲ್ಲಿ ಸಿ.ಆರ್.ಎಫ್. (C.R.F.) ಅಡಿಯಲ್ಲಿ ಜಿಲ್ಲೆಯ ಇತರ ವಿಧಾನ ಸಭಾ ಕ್ಷೇತ್ರದಲ್ಲಿ ಕೈಗೊಂಡಿರುವಂತೆ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳಲಾಗುವುದೆ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):

ಅ) ಕೇಂದ್ರ ರಸ್ತೆ ನಿಧಿ ಅಡಿಯಲ್ಲಿ ವಿಧಾನ ಸಭಾ ಕ್ಷೇತ್ರವಾರು ಹಣ ಬಿಡುಗಡೆ ಮಾಡುತ್ತಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ

ಇ) ಅನುದಾನದ ಲಭ್ಯತೆಯ ಮೇರೆಗೆ ಪರಿಶೀಲಿಸಲಾಗುವುದು.

ಮಂಡ್ಯ ಜಿಲ್ಲೆಯಲ್ಲಿ ರಸ್ತೆಗಳ ದುರಸ್ತಿ

2200 (2673) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ನಿರ್ವಹಿಸಲ್ಪಡುತ್ತಾ ಇರುವ ರಸ್ತೆಗಳ ಬದಿಯಲ್ಲಿ ದೂರವಾಣಿ ಇಲಾಖೆಯವರು ಮತ್ತು ಆಪ್ಟಿಕಲ್ ಫೈಬರ್ ಕೇಬಲ್ (OFC) ಹಾಕುವವರು ಅವರು ಕಾಮಗಾರಿಗಳನ್ನು ಅನುಷ್ಠಾನಗೊಳಿಸುವಾಗ ಆಗಿರುವ ರಸ್ತೆಯ ವಿರೂಪವನ್ನು ದುರಸ್ತಿಗೊಳಿಸಲು ಸರ್ಕಾರಕ್ಕೆ ಏನಾದರೂ ಹಣ ಪಾವತಿ ಮಾಡುತ್ತಾ ಇದ್ದಾರೆಯೆ;

ಆ) ಹಾಗಾದರೆ ಪ್ರಸಕ್ತ ಆರ್ಥಿಕ ವರ್ಷದಲ್ಲಿ ಈ ದಿಸೆಯಲ್ಲಿ ಸಂಗ್ರಹವಾದ ಹಣ ಎಷ್ಟು;

ಇ) ಹೀಗೆ ಕ್ರೋಢೀಕೃತವಾಗಿರುವ ಹಣವನ್ನು ಯಾವ್ಯಾವ ರಸ್ತೆಗಳ ದುರಸ್ತಿ ಹಾಗೂ ಅಭಿವೃದ್ಧಿಗೆ ವೆಚ್ಚ ಮಾಡಲಾಗಿದೆ;

ಈ) ವೆಚ್ಚ ಮಾಡಲಾಗದಿದ್ದಲ್ಲಿ, ಕಾರಣಗಳೇನು?